**All India Radio: Bangalore**
**National Bulletin In Kannada**
**24.08.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನ ಉದ್ಘಾಟಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ
2. ಮೊದಲ ಮಾನವ ಸಹಿತ ಬಾಹ್ಯಾಕಾಶ ಕಾರ್ಯಾಚರಣೆ - ಗಗನಯಾನಕ್ಕೆ ಭಾರತ ಸಂಪೂರ್ಣ ಸಿದ್ಧ: ರಕ್ಷಣಾ ಸಚಿವ ರಾಜನಾಥ್ ಸಿಂಗ್
3. ಡಿಆರ್‌ಡಿಒ ದಿಂದ ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್‌ನ ಮೊದಲ ಹಾರಾಟ ಪರೀಕ್ಷೆ ಯಶಸ್ವಿ
4. ಇಂದಿನಿಂದ ೧೪೫ನೇ ಆವೃತ್ತಿಯ ಯುಎಸ್ ಓಪನ್ ಟೆನಿಸ್ ಪಂದ್ಯಾವಳಿ ಆರಂಭ
5. ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ಚೇತೇಶ್ವರ್ ಪೂಜಾರ ನಿವೃತ್ತಿ

<><><><>

ದೆಹಲಿ ವಿಧಾನಸಭೆಯಲ್ಲಿ ಇಂದು ಎರಡು ದಿನಗಳ ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಉದ್ಘಾಟಿಸಿದರು. ದೇಶದಲ್ಲಿ ಮೊದಲ ಚುನಾಯಿತ ಸ್ಪೀಕರ್ ಆಗಿ ವಿಠಲಭಾಯಿ ಪಟೇಲ್ ಕೇಂದ್ರ ವಿಧಾನಸಭೆಯ ಸ್ಪೀಕರ್ ಆಗಿ ಅಧಿಕಾರ ವಹಿಸಿಕೊಂಡ ಶತಮಾನೋತ್ಸವದ ಸ್ಮರಣಾರ್ಥ ಈ ಸಮ್ಮೇಳನವನ್ನು ಆಯೋಜಿಸಲಾಗಿದೆ. ೨೯ ರಾಜ್ಯ ವಿಧಾನಸಭೆಗಳ ಸ್ಪೀಕರ್‌ಗಳು ಮತ್ತು ಆರು ರಾಜ್ಯಗಳ ವಿಧಾನ ಪರಿಷತ್ತಿನ ಸಭಾಪತಿಗಳು ಮತ್ತು ಉಪಸಭಾಪತಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ಇದೇ ವೇಳೆ ವಿಠಲಭಾಯಿ ಪಟೇಲ್ ಅವರ ಜೀವನ, ಸಂಸದೀಯ ಕೊಡುಗೆ ಮತ್ತು ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಪಾತ್ರವನ್ನು ಆಧರಿಸಿದ ಪ್ರದರ್ಶನ, ವಿಶೇಷ ಸಾಕ್ಷ್ಯಚಿತ್ರ ಮತ್ತು ಸ್ಮರಣಾರ್ಥ ಅಂಚೆ ಚೀಟಿಯನ್ನು ಬಿಡುಗಡೆ ಮಾಡಲಾಯಿತು.

<><><><>

ಭಾರತವು ತನ್ನ ಮೊದಲ ಮಾನವ ಸಹಿತ ಬಾಹ್ಯಾಕಾಶ ಹಾರಾಟ ಕಾರ್ಯಾಚರಣೆಯಾದ ಗಗನಯಾನ ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಗಗನಯಾನ ಮಿಷನ್ ಅಡಿ ಭಾರತದ ಮೊದಲ ಮಾನವ ಸಹಿತ ಬಾಹ್ಯಾಕಾಶ ಹಾರಾಟ ಕಾರ್ಯಾಚರಣೆಗೆ ಆಯ್ಕೆಯಾದ ನಾಲ್ವರು ಗಗನಯಾತ್ರಿಗಳನ್ನು ಇಂದು ನವದೆಹಲಿಯ ಸುಬ್ರೋಟೊ ಪಾರ್ಕ್‌ನಲ್ಲಿರುವ ವಾಯುಪಡೆಯ ಸಭಾಂಗಣದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಸನ್ಮಾನಿಸಲಾಯಿತು. ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಇದು ಕೇವಲ ತಾಂತ್ರಿಕ ಸಾಧನೆಯಲ್ಲ. ಸ್ವಾವಲಂಬಿ ಭಾರತದ ಪ್ರಯಾಣದಲ್ಲಿ ಹೊಸ ಅಧ್ಯಾಯವಾಗಿದೆ ಎಂದರು. ಭಾರತದ ಕೊಡುಗೆ ಕೇವಲ ಬಾಹ್ಯಾಕಾಶಕ್ಕೆ ಉಪಗ್ರಹಗಳನ್ನು ಕಳುಹಿಸುವುದಲ್ಲ. ದೇಶವು ತನ್ನ ಸಾಮರ್ಥ್ಯವನ್ನು ಜಗತ್ತಿಗೆ ತೋರಿಸಿದೆ. ಭಾರತವು ಈಗಾಗಲೇ ಚಂದ್ರನಿಂದ ಮಂಗಳದವರೆಗೆ ತನ್ನ ಉಪಸ್ಥಿತಿಯನ್ನು ಗುರುತಿಸಿದೆ ಎಂದು ಸಚಿವರು ಹೇಳಿದರು. ಭಾರತವು ಬಾಹ್ಯಾಕಾಶವನ್ನು ಕೇವಲ ಸಂಶೋಧನಾ ಕ್ಷೇತ್ರವಾಗಿ ನೋಡುವುದಿಲ್ಲ. ಬದಲಿಗೆ ಆರ್ಥಿಕತೆ, ಭದ್ರತೆ, ಇಂಧನ ಮತ್ತು ಮಾನವೀಯತೆಯ ಭವಿಷ್ಯದ ಕೀಲಿಯಾಗಿ ನೋಡುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

ಗಗನಯಾನ ಕಾರ್ಯಾಚರಣೆಗಾಗಿ ಕಠಿಣ ತರಬೇತಿ ಪಡೆಯುತ್ತಿರುವ ಭಾರತೀಯ ವಾಯುಪಡೆಯ ಪೈಲಟ್‌ಗಳಾದ ಗ್ರೂಪ್ ಕ್ಯಾಪ್ಟನ್‌ಗಳಾದ ಶುಭಾಂಶು ಶುಕ್ಲಾ, ಪ್ರಶಾಂತ್ ಬಾಲಕೃಷ್ಣನ್ ನಾಯರ್, ಅಜಿತ್ ಕೃಷ್ಣನ್ ಮತ್ತು ಅಂಗದ್ ಪ್ರತಾಪ್ ಅವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

<><><><>

ಒಡಿಶಾದ ಕರಾವಳಿಯಲ್ಲಿ ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್‌ನ ಮೊದಲ ಹಾರಾಟ ಪರೀಕ್ಷೆಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ - ಡಿಆರ್‌ಡಿಒ ಯಶಸ್ವಿಯಾಗಿ ನಡೆಸಿದೆ. ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್ ಎಂಬುದು ದೇಶೀಯ ಕ್ಷಿಪ್ರ ಪ್ರತಿಕ್ರಿಯೆ ನೆಲದಿಂದ ಆಕಾಶಕ್ಕೆ ಹಾರುವ ಕ್ಷಿಪಣಿ, ಅಡ್ವಾನ್ಸ್ಡ್ ವೆರಿ ಶಾರ್ಟ್ ರೇಂಜ್ ಏರ್ ಡಿಫೆನ್ಸ್ ಸಿಸ್ಟಮ್ ಕ್ಷಿಪಣಿ ಮತ್ತು ಹೈ-ಪವರ್ ಲೇಸರ್-ಆಧಾರಿತ ಡೈರೆಕ್ಟ್ ಎನರ್ಜಿ ವೆಪನ್ ಅನ್ನು ಒಳಗೊಂಡಿರುವ ಬಹು-ಪದರದ ವಾಯು ರಕ್ಷಣಾ ವ್ಯವಸ್ಥೆಯಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್‌ನ ಯಶಸ್ವಿ ಅಭಿವೃದ್ಧಿಗಾಗಿ ಡಿಆರ್‌ಡಿಒ, ಭಾರತೀಯ ಸಶಸ್ತ್ರ ಪಡೆಗಳು ಮತ್ತು ಉದ್ಯಮವನ್ನು ಅಭಿನಂದಿಸಿದರು. ಈ ವಿಶಿಷ್ಟ ಹಾರಾಟ ಪರೀಕ್ಷೆಗಳು ದೇಶದ ಬಹು-ಪದರದ ವಾಯು ರಕ್ಷಣಾ ಸಾಮರ್ಥ್ಯವನ್ನು ಸ್ಥಾಪಿಸಿವೆ ಮತ್ತು ಶತ್ರುಗಳ ವೈಮಾನಿಕ ಬೆದರಿಕೆಗಳ ವಿರುದ್ಧ ರಕ್ಷಣೆಯನ್ನು ಬಲಪಡಿಸಲಿವೆ ಎಂದು ಅವರು ಹೇಳಿದರು.

<><><>

ಫಿಜಿ ಪ್ರಧಾನಿ ಸಿತಿವೇನಿ ಲಿಗಮಮದ ರಬುಕ ಅವರು ಇಂದಿನಿಂದ ಮೂರು ದಿನಗಳ ಕಾಲ ಭಾರತ ಭೇಟಿಯಲ್ಲಿದ್ದಾರೆ. ಅವರು ಇಂದು ಬೆಳಗ್ಗೆ ನವದೆಹಲಿಗೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ಕೇಂದ್ರ ಶಿಕ್ಷಣ ಮತ್ತು ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವಾಲಯದ ರಾಜ್ಯ ಸಚಿವ ಸುಕಾಂತ ಮಜುಂದಾರ್ ಬರಮಾಡಿಕೊಂಡರು. ಫಿಜಿ ಪ್ರಧಾನಿಯೊಂದಿಗೆ ಅವರ ಪತ್ನಿ ಸುಲುಯೆಟಿ ರಬುಕ ಇದ್ದಾರೆ. ಫಿಜಿ ನಿಯೋಗದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಸೇವೆಗಳ ಸಚಿವ ರತು ಅಟೋನಿಯೊ ಲಾಲಬಲವು ಮತ್ತು ಹಿರಿಯ ಅಧಿಕಾರಿಗಳು ಇದ್ದಾರೆ. ಪ್ರಧಾನಿ ರಬುಕ ಅವರು ತಮ್ಮ ಪ್ರಸ್ತುತ ಅವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಾಳೆ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಬಳಿಕ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದಾರೆ. ಈ ಭೇಟಿ ಭಾರತ ಮತ್ತು ಫಿಜಿ ನಡುವಿನ ದೀರ್ಘಕಾಲಿನ ಮತ್ತು ಶಾಶ್ವತ ಸಂಬಂಧಗಳನ್ನು ಒತ್ತಿ ಹೇಳುತ್ತದೆ.

<><><>

೧೪೫ನೇ ಆವೃತ್ತಿಯ ಯುಎಸ್ ಓಪನ್ ಟೆನಿಸ್ ಇಂದು ನ್ಯೂಯಾರ್ಕ್‌ನ ಯುಎಸ್‌ಟಿಎ ಬಿಲ್ಲಿ ಜೀನ್ ಕಿಂಗ್ ರಾಷ್ಟ್ರೀಯ ಟೆನಿಸ್ ಕೇಂದ್ರದಲ್ಲಿ ಆರಂಭವಾಗಲಿದೆ. ಪುರುಷರ ಸಿಂಗಲ್ಸ್‌ನಲ್ಲಿ ವಿಶ್ವದ ನಂ.೧ ಮತ್ತು ಹಾಲಿ ಚಾಂಪಿಯನ್ ಇಟಲಿಯ ಜಾನಿಕ್ ಸಿನ್ನರ್ ಮುನ್ನಡೆಸಲಿದ್ದಾರೆ. ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್, ನಾಲ್ಕು ಬಾರಿ ಯುಎಸ್ ಓಪನ್ ವಿಜೇತ ನೊವಾಕ್ ಜೊಕೊವಿಕ್ ಮತ್ತು ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಪಂದ್ಯಾವಳಿಯಲ್ಲಿ ಭಾಗವಹಿಸುವ ಪ್ರಮುಖ ಆಟಗಾರರಾಗಿದ್ದಾರೆ.

<><><>

ಭಾರತ ಕ್ರಿಕೆಟ್ ತಂಡದ ಸದಸ್ಯ, ಒಂದು ದಶಕಕ್ಕೂ ಹೆಚ್ಚಿನ ಕಾಲ ಟೆಸ್ಟ್ ಕ್ರಿಕೆಟ್‌ನಲ್ಲಿ ೩ನೇ ಕ್ರಮಾಂಕದ ವಿಶ್ವಸಾರ್ಹ ಬ್ಯಾಟರ್ ಎಂದೆನಿಸಿದ್ದ ಚೇತೇಶ್ವರ್ ಪೂಜಾರ ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಭಾರತದ ಪರವಾಗಿ ಅವರು, ೧೦೩ ಟೆಸ್ಟ್ ಹಾಗೂ ೫ ಏಕದಿನ ಪಂದ್ಯಗಳನ್ನಾಡಿದ್ದು, ಟೆಸ್ಟ್ ಮಾದರಿಯಲ್ಲಿ ೪೩.೬೦ ಸರಾಸರಿಯಲ್ಲಿ ೭ ಸಾವಿರದ ೧೯೫ ರನ್ ಗಳಿಸಿದ್ದಾರೆ.

<><><>

ಲಂಡನ್ ಮೆಟಲ್ ಎಕ್ಸ್‌ಚೇಂಜ್ ನಂತೆಯೇ ಖನಿಜ ವ್ಯಾಪಾರ ವಿನಿಮಯ ಕೇಂದ್ರವನ್ನು ಕೇಂದ್ರ ಸರ್ಕಾರ ಸ್ಥಾಪಿಸಲಿದೆ ಎಂದು ಕೇಂದ್ರ ಕಲ್ಲಿದ್ದಲು ಗಣಿ ಸಚಿವ ಜಿ.ಕಿಶನ್ ರೆಡ್ಡಿ ತಿಳಿಸಿದ್ದಾರೆ. ಹೈದರಾಬಾದ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೆಬಿಯ ಮಾನದಂಡಗಳಿಗೆ ಅನುಗುಣವಾಗಿ ಖನಿಜ ವಿನಿಮಯವನ್ನು

ಸ್ಥಾಪಿಸಲಾಗುವುದು ಎಂದು ಹೇಳಿದರು. ಪ್ರಸ್ತಾವಿತ ಖನಿಜ ವಿನಿಮಯವು ಕೈಗಾರಿಕೆಗಳು, ವ್ಯಾಪಾರಿಗಳು ಮತ್ತು ಇತರೆ ಪಾಲುದಾರರಿಗೆ ಉತ್ತಮ ಬೆಲೆ ಆವಿಷ್ಕಾರವನ್ನು ಸುಗಮಗೊಳಿಸುವ ನಿರೀಕ್ಷೆಯಿದೆ. ಖನಿಜ ವಿನಿಮಯವನ್ನು ಇತ್ತೀಚೆಗೆ ಅಂಗೀಕರಿಸಲಾದ ಶಾಸನದ ಭಾಗವಾಗಿ ಮಾಡಲಾಗಿದೆ ಮತ್ತು ಸಂಬಂಧಿತ ಮಾರ್ಗಸೂಚಿಗಳನ್ನು ಶೀಘ್ರದಲ್ಲೇ ಹೊರಡಿಸಲಾಗುವುದು ಎಂದು ಅವರು ವಿವರಿಸಿದರು.

<><><><>

ಉತ್ತರ ಕೊರಿಯಾ ತನ್ನ ಯುದ್ಧ ಸಾಮರ್ಥ್ಯವನ್ನು ನಿರ್ಣಯಿಸಲು ಸುಧಾರಿತ ವಾಯು ರಕ್ಷಣಾ ಕ್ಷಿಪಣಿಗಳನ್ನು ಪರೀಕ್ಷಿಸಿದೆ. ಉತ್ತರ ಕೊರಿಯಾದ ಅಧ್ಯಕ್ಷ ಕಿಮ್ ಜಾಂಗ್-ಉನ್ ನಿನ್ನೆ ವಿವಿಧ ಗುರಿಗಳಲ್ಲಿ ಈ ಪರೀಕ್ಷೆಯ ಮೇಲ್ವಿಚಾರಣೆ ನಡೆಸಿದ್ದಾರೆ ಎಂದು ಅಲ್ಲಿನ ಸರ್ಕಾರಿ ಮಾಧ್ಯಮ ವರದಿ ಮಾಡಿದೆ. ದಕ್ಷಿಣ ಕೊರಿಯಾ ಮತ್ತು ಅಮೆರಿಕ ಕಳೆದ ವಾರದಿಂದ ೧೧ ದಿನಗಳ ಕಾಲ ಉಲ್ಚಿ ಫ್ರೀಡಂ ಶೀಲ್ಡ್ ಎಂಬ ಜಂಟಿ ಮಿಲಿಟರಿ ಸಮಾರಾಭ್ಯಾಸವನ್ನು ನಡೆಸುತ್ತಿರುವಾಗ ಈ ಪರೀಕ್ಷೆ ನಡೆದಿದೆ.

<><><><>

ಕೆನಡಾದಲ್ಲಿ ನಡೆದ ವಿಶ್ವ ಯುವ ಚಾಂಪಿಯನ್‌ಶಿಪ್‌ನಲ್ಲಿ ವೈಯಕ್ತಿಕ ಜೂನಿಯರ್ ವಿಶ್ವ ಪ್ರಶಸ್ತಿಯನ್ನು ಗೆದ್ದ ಮೊದಲ ಭಾರತೀಯ ಮಹಿಳಾ ಕಾಂಪೌಂಡ್ ಬಿಲ್ಲುಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಭಾರತದ ಚಿಕಿತಾ ತನಿಪರ್ತಿ ಇತಿಹಾಸ ಸೃಷ್ಟಿಸಿದ್ದಾರೆ. ೨೧ ವರ್ಷದೊಳಗಿನವರ ಮಹಿಳೆಯರ ಫೈನಲ್ ಪಂದ್ಯದಲ್ಲಿ ಅವರು ಕೊರಿಯಾದ ಯೆರಿನ್ ಪಾರ್ಕ್ ಅವರನ್ನು ೧೪೨-೧೩೬ ಅಂಕಗಳಿಂದ ಸೋಲಿಸಿದರು.

<><><><>

ಕಝಾಕಿಸ್ತಾನದ ಶಿಮ್ಕೆಂಟ್‌ನಲ್ಲಿ ನಡೆದ ೧೬ನೇ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಮಿಶ್ರ ಏರ್ ರೈಫಲ್ ವಿಭಾಗಗಳಲ್ಲಿ ಭಾರತ ಮೂರು ಚಿನ್ನದ ಪದಕಗಳನ್ನು ಗೆದ್ದಿದೆ. ಭಾರತೀಯ ಶೂಟರ್‌ಗಳು ಸೀನಿಯರ್, ಜೂನಿಯರ್ ಮತ್ತು ಯೂತ್ ಮಿಶ್ರ ತಂಡ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಪದಕ ಪಟ್ಟಿಯಲ್ಲಿ ಭಾರತದ ಅಗ್ರ ಸ್ಥಾನಕ್ಕೆ ಕಾರಣರಾದರು. ಸೀನಿಯರ್ ಮಿಶ್ರ ತಂಡ, ೧೦ ಮೀಟರ್ ಏರ್ ರೈಫಲ್ ಸ್ಪರ್ಧೆಯಲ್ಲಿ, ಎಲವೆನಿಲ್ ವಲರಿವನ್ ಮತ್ತು ಅರ್ಜುನ್ ಬಾಬುಟಾ ಚೀನಾದ ಪೆಂಗ್ ಕ್ಸಿನ್ಲು ಮತ್ತು ಲು ಡಿಂಗ್ಕೆ ಅವರನ್ನು ಫೈನಲ್‌ನಲ್ಲಿ ೧೭-೧೧ ಅಂತರದಿಂದ ಸೋಲಿಸಿ ಚಿನ್ನ ಗೆದ್ದರು. ಭಾರತೀಯ ಜೋಡಿ ೬೩೪.೦ ಅಂಕಗಳೊಂದಿಗೆ ಅರ್ಹತಾ ಸುತ್ತಿನಲ್ಲಿ ಅಗ್ರಸ್ಥಾನ ಗಳಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>